# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 932 (1038) |
| ಸದಸ್ಯರ ಹೆಸರು: | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 18.12.2024 |
| ಉತ್ತರಿಸುವ ಸಚಿವರು: | ಮಾನ್ಯ ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಒಟ್ಟು ಎಷ್ಟು ತಾಲ್ಲೂಕುಗಳಲ್ಲಿ ನಿಯಮ 32ರ ಅಡಿ ತಹಶೀಲ್ದಾರ್ ಗ್ರೇಡ್-2 ಹುದ್ದೆ ಹೊಂದಿರುವ ಅಧಿಕಾರಿಗಳು ತಹಶೀಲ್ದಾರ್ ಗ್ರೇಡ್-1 ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ತಾಲ್ಲೂಕುವಾರು ಅಧಿಕಾರಿಗಳ ವಿವರ ನೀಡುವುದು) | ಶ್ರೀ ಪಿ. ಗುರುರಾಜ್, ತಹಶೀಲ್ದಾರ್ ಗ್ರೇಡ್-2 (ನಿಯಮ-32) ಇವರನ್ನು ಉಡುಪಿ ಜಿಲ್ಲೆ, ಉಡುಪಿ ತಾಲ್ಲೂಕಿನ ತಹಶೀಲ್ದಾರ್ ಗ್ರೇಡ್-1 ಹುದ್ದೆಗೆ ಆಡಳಿತಾತ್ಮಕ ಹಿತದೃಷ್ಟಿಯಿಂದ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿರುತ್ತದೆ. |
| ಆ) | ತಹಶೀಲ್ದಾರರು ಹಾಗೂ ತಾಲ್ಲೂಕು ದಂಡಾಧಿಕಾರಿಯಾಗಿ ಇಂತಹ ಅಧಿಕಾರಿಗಳು ಹೊರಡಿಸಿರುವ ಆದೇಶಗಳಿಗೆ ಕಾನೂನಿನ ಅಡಿಯಲ್ಲಿ ಮಾನ್ಯತೆ ಇದೆಯೆ; (ಸಂಬಂಧಿಸಿದ ಆದೇಶ ಪ್ರತಿ ನೀಡುವುದು) | ಸರ್ಕಾರದ ಆದೇಶದನ್ವಯ ತಹಶೀಲ್ದಾರ್ ಗ್ರೇಡ್-1 ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಅವರು ಹೊಂದಿರುವ ಸ್ಥಾನದ (ಹುದ್ದೆಯ) ಆಧಾರದ ಮೇಲೆ ಕರ್ತವ್ಯ ನಿರ್ವಹಿಸುವುದರಿಂದ ಸದರಿ ಅಧಿಕಾರಿಯವರು ಹೊರಡಿಸಿರುವ ಆದೇಶಗಳಿಗೆ ಕಾನೂನಿನ ಅಡಿ ಮಾನ್ಯತೆ ಇರುತ್ತದೆ. |
| ಇ) | ನಿಯಮ-32ರ ಅಡಿ ತಹಶೀಲ್ದಾರ್ ಗ್ರೇಡ್-2 ಹುದ್ದೆ ಹೊಂದಿರುವ ಅಧಿಕಾರಿಗಳನ್ನು ತಹಶೀಲ್ದಾರ್ ಗ್ರೇಡ್-1 ಆಗಿ ನಿಯೋಜಿಸಲು ಕಾರಣವೇನು; | ಕಂದಾಯ ಇಲಾಖೆಯ ತಹಶೀಲ್ದಾರ್ ಗ್ರೇಡ್-2 ಹಾಗೂ ತಹಶೀಲ್ದಾರ್ ಗ್ರೇಡ್-1 ವೃಂದದ ಅಧಿಕಾರಿಗಳು ಪ್ರಸ್ತುತ ಕೊರತೆಯಿದ್ದು, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಆದೇಶದಂತೆ ದಿನಾಂಕ:18.10.2024 ರಂದು ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ್ದು, ಸದರಿ ಜೇಷ್ಠತಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿದ್ದು, ಸದರಿ ಆಕ್ಷೇಪಣೆ/ಸಲಹೆಗಳನ್ನು ಸರ್ಕಾರವು ಪರಿಶೀಲಿಸಿ, ಅಂತಿಮಗೊಳಿಸಿದ ನಂತರ ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ಮುಂಬಡ್ತಿ ನೀಡುವ ಕುರಿತು ಪರಿಶೀಲಿಸಲಾಗುವುದು. |
| ಈ) | ರಾಜ್ಯದಲ್ಲಿ ಗ್ರೇಡ್-1 ಹಾಗೂ ಗ್ರೇಡ್-2 ತಹಶೀಲ್ದಾರ್‌ರ ಕೊರತೆ ಇದೆಯೇ? (ವೃಂದಬಲ ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಹಾಗೂ ಹೆಸರಿನ ಪಟ್ಟಿ ನೀಡುವುದು) | |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| | | ತಹಶೀಲ್ದಾರ್ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗಳ ವೃಂದ ಬಲವನ್ನು ಸಮಗ್ರ ಪರಿಷ್ಕರಣೆಗೆ ಒಳಪಡಿಸಲಾಗಿದ್ದು, ಕರಡು ವೃಂದಬಲವನ್ನು ಪ್ರಕಟಿಸಲಾಗಿದೆ. ವೃಂದ ಬಲವನ್ನು ಅಂತಿಮಗೊಳಿಸಲು ಕ್ರಮ ವಹಿಸಲಾಗುತ್ತಿದೆ.<br><br>(ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಹಾಗೂ ಹೆಸರಿನ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ). |

ಸಂಖ್ಯೆ:ಇ-ಆರ್‌ಡಿ 560 ಎಎಸ್‌ಡಿ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು